# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

## ಮುಕ್ತಗಂಗೋತ್ರಿ, ಮೈಸೂರು-570 006

ದಿನಾಂಕ 10-01-2020ರಂದು ಅಪರಾಹ್ನ 3:00 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳ ಕಚೇರಿ ಸಭಾಂಗಣದಲ್ಲಿ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆದ 15ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡಾವಳಿ.

| ಉಪಸ್ಥಿತರು | |
|---|---|
| **ಪ್ರೊ. ವಿದ್ಯಾಶಂಕರ್ .ಎಸ್**<br>ಮಾನ್ಯ ಕುಲಪತಿಗಳು ಹಾಗೂ<br>ಶೈಕ್ಷಣಿಕ ಮಂಡಳಿಯ ಅಧ್ಯಕ್ಷರು,<br>ಕರಾಮುವಿ, ಮೈಸೂರು. | **ಪ್ರೊ. ರಮೇಶ್ .ಬಿ**<br>ಕುಲಸಚಿವರು<br>ಕರಾಮುವಿ,<br>ಮೈಸೂರು. |
| **ಡಾ. ತೇಜಸ್ವಿ ನವಿಲೂರು**<br>ಡೀನ್ (ಶೈಕ್ಷಣಿಕ) (ಕಾ.ಭಾ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಡಾ. ಕವಿತಾ ರೈ**<br>ಕುಲಸಚಿವ (ಪರೀಕ್ಷಾಂಗ) (ಕಾ.ಭಾ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ॥ ಪ್ರಭುಸೇನ ಡಿ.**<br>ಡೀನ್ (ಅಧ್ಯಯನ ಕೇಂದ್ರಗಳು) (ಕಾ.ಭಾ)<br>ಹಾಗೂ ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಡಾ॥ ಲಕ್ಷ್ಮಿ.ಎನ್**<br>ಮುಖ್ಯಸ್ಥರು, ಶಿಕ್ಷಣಶಾಸ್ತ್ರ ವಿಭಾಗ ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | |
| ವಿಶೇಷ ಆಹ್ವಾನಿತರು | |
| **ಡಾ॥ ನಿರಂಜನ್ ರಾಜ್**<br>CIQA ನಿರ್ದೇಶಕರು<br>ಕರಾಮುವಿ, ಮೈಸೂರು. | |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಪತಿಗಳು ಮಾತನಾಡುತ್ತಾ, 15ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಕಾರ್ಯಸೂಚಿಯನ್ನು ಸಭೆಯಲ್ಲಿ ಮಂಡಿಸಿದರು.

ಡೀನ್(ಶೈಕ್ಷಣಿಕ) ಕುಲಪತಿಗಳು

ವಿಷಯ ಸಂಖ್ಯೆ: 15.01

ವಿಷಯ: ವಿವಿಧ ಶಿಕ್ಷಣಕ್ರಮಗಳ ಅಧ್ಯಯನ ಮಂಡಳಿಗಳನ್ನು ರಚಿಸಲಾಗಿದ್ದು, ಅವುಗಳ ಅನುಮೋದನೆ ಬಗ್ಗೆ.

*****

ವಿಶ್ವವಿದ್ಯಾನಿಲಯದ ಪರಿನಿಯಮ II ರನ್ವಯ ಈ ಹಿಂದೆ ರಚಿತವಾಗಿದ್ದ ಅಧ್ಯಯನ ಮಂಡಳಿಗಳ ಅವಧಿ ಪೂರ್ಣವಾಗಿದ್ದ ಹಿನ್ನೆಲೆಯಲ್ಲಿ ಈ ಕೆಳಕಂಡ ಅಧ್ಯಯನ ವಿಭಾಗಗಳ ಶೈಕ್ಷಣಿಕ ಚಟುವಟಿಕೆಯ ನಿರ್ವಹಣೆಗೆ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ಅಧ್ಯಯನ ಮಂಡಳಿಯನ್ನು ರಚಿಸಿ ಕಚೇರಿ ಆದೇಶ ಹೊರಡಿಸಲಾಗಿದೆ. ಇವುಗಳಿಗೆ ಸಂಬಂಧಿಸಿದಂತೆ ಶೈಕ್ಷಣಿಕ ಮಂಡಳಿ ಘಟನೋತ್ತರ ಅನುಮೋದನೆಗೆ ವಿಷಯ ಮಂಡಿಸಿದೆ.

| ಕ್ರ.ಸಂ | ಅಧ್ಯಯನ/ಸಂಶೋಧನಾ ವಿಭಾಗ | ಅಧ್ಯಯನ ಮಂಡಳಿ | ಅವಧಿ |
|---|---|---|---|
| 01 | ಮಾಹಿತಿ ವಿಜ್ಞಾನ ವಿಭಾಗ | ಸಂಯುಕ್ತ ಅಧ್ಯಯನ ಮಂಡಳಿ (UG, PG) | ದಿ: 12–11–2019 ರಿಂದ 11–11–2022 |
| 02 | ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ಮತ್ತು ಸಂಶೋಧನಾ ವಿಭಾಗ | ಅಧ್ಯಯನ ಮಂಡಳಿ (UG) | ದಿ: 20–11–2019 ರಿಂದ 19–11–2022 |
| 03 | ಗಣಿತಶಾಸ್ತ್ರ ಅಧ್ಯಯನ ವಿಭಾಗ | ಅಧ್ಯಯನ ಮಂಡಳಿ (UG) | ದಿ: 17–12–2019 ರಿಂದ 16–12–2022 |
| 04 | ಗಣಕಯಂತ್ರ ವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ | ಸಂಯುಕ್ತ ಅಧ್ಯಯನ ಮಂಡಳಿ (UG, PG) | ದಿ: 26–12–2019 ರಿಂದ 25–12–2022 |
| 05 | ಉರ್ದು ಅಧ್ಯಯನ ಮತ್ತು ಸಂಶೋಧನಾ ವಿಭಾಗ | ಅಧ್ಯಯನ ಮಂಡಳಿ (PG) | ದಿ: 27–12–2019 ರಿಂದ 26–12–2022 |
| 06 | ಪರಿಸರ ಅಧ್ಯಯನ ಮತ್ತು ಸಂಶೋಧನಾ ವಿಭಾಗ | ಸಂಯುಕ್ತ ಅಧ್ಯಯನ ಮಂಡಳಿ (UG, PG) | ದಿ: 30–12–2019 ರಿಂದ 29–12–2022 |
| 07 | ಸಾರ್ವಜನಿಕ ಆಡಳಿತ ಅಧ್ಯಯನ ಮತ್ತು ಸಂಶೋಧನಾ ವಿಭಾಗ | ಡಿಪ್ಲೊಮ (PGDS) (DGS) | ದಿ: 11–11–2019 ರಿಂದ 10–11–2022 |

ತೀರ್ಮಾನ : ಈ ಮೇಲ್ಕಂಡ 1 ರಿಂದ 7ರವರೆಗಿನ ಕ್ರಮಸಂಖ್ಯೆಯ ವಿಶ್ವವಿದ್ಯಾನಿಲಯದ ಅಧ್ಯಯನ/ಸಂಶೋಧನಾ ವಿಭಾಗಗಳ ಅಧ್ಯಯನ ಮಂಡಳಿಯನ್ನು ರಚಿಸಲಾಗಿರುವ ದಿನಾಂಕಗಳೊಂದಿಗೆ ಸಭೆಯಲ್ಲಿ ಚರ್ಚಿಸಿ ಅನುಮೋದಿಸಲಾಯಿತು.

-----

ವಿಷಯ ಸಂಖ್ಯೆ: 15.02

ವಿಷಯ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ/ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಹಾಗೂ ಡಿಪ್ಲೋಮಾ ವಿಷಯಗಳಿಗೆ ಪ್ರಮಾಣ ಪತ್ರಗಳನ್ನು ನವೀನ ಮಾದರಿಯಲ್ಲಿ ವಿತರಿಸಲು ಅನುಮೋದಿಸುವ ಬಗೆಗೆ.

*****

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ವಿವಿಧ ಸ್ನಾತಕ/ಸ್ನಾತಕೋತ್ತರ ಪದವಿ ಪಡೆದಿರುವ ವಿದ್ಯಾರ್ಥಿಗಳ ಕೋರಿಕೆ ಮೇರೆಗೆ ತಾತ್ಕಾಲಿಕ ತೇರ್ಗಡೆ ಪ್ರಮಾಣ ಪತ್ರ ವಿತರಿಸಲಾಗುತ್ತಿದ್ದು, ಸದರಿ ಮಾದರಿಯನ್ನು ಮಾನ್ಯ ಕುಲಪತಿಯವರು ಬದಲಾವಣೆ ಮಾಡಿ ವಿವಿಧ ಸ್ನಾತಕ/ಸ್ನಾತಕೋತ್ತರ ಪದವಿ ಪಡೆದಿರುವ ವಿದ್ಯಾರ್ಥಿಗಳಿಗೆ

ಡೀನ್(ಶೈಕ್ಷಣಿಕ)

ಕುಲಪತಿಗಳು

ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳನ್ನು ಹಾಗೂ ವಿಶ್ವವಿದ್ಯಾನಿಲಯದ ವಿವಿಧ ಡಿಪ್ಲೋಮಾ ವಿಷಯಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಕೋರಿಕೆಯನುಸಾರ ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ನವೀನ ಮಾದರಿಯಲ್ಲಿ ವಿತರಿಸಲು ಕ್ರಮವಹಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ (ನವೀನ ಮಾದರಿ) ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಮತ್ತು ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ಸಿದ್ಧಪಡಿಸಿಲಾಗಿದೆ, ಮಾದರಿ ಪ್ರಮಾಣ ಪತ್ರಗಳನ್ನು ಲಗತ್ತಿಸಿದೆ.

ಸದರಿ ವಿಷಯವನ್ನು **15**ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಚರ್ಚೆ ಹಾಗೂ ನಿರ್ಣಯಕ್ಕಾಗಿ ವಿಷಯವನ್ನು ಮಂಡಿಸಲಾಗಿದೆ.

ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಸಂಪೂರ್ಣವಾಗಿ ಚರ್ಚಿಸಿ, ಪ್ರಮಾಣ ಪತ್ರಗಳ ಬಗ್ಗೆ ಹೆಚ್ಚಿನ ಕಾಳಜಿವಹಿಸಿ ಕರ್ತವ್ಯ ನಿರ್ವಹಣೆ ಮಾಡಬೇಕಾಗಿರುತ್ತದೆ ಎಂದು ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

**ತೀರ್ಮಾನ :** **ಕರಾಮುವಿ ವಿವಿಧ ಸ್ನಾತಕ/ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಹಾಗು ಡಿಪ್ಲೋಮಾ ವಿಷಯಗಳಿಗೆ ಪ್ರಮಾಣ ಪತ್ರಗಳನ್ನು ನವೀನ ಮಾದರಿಯಲ್ಲಿ (ನಕಲಾಗದ ರೀತಿಯಲ್ಲಿ ಎಚ್ಚರವಹಿಸಿ) ವಿತರಿಸಲು ತೀರ್ಮಾನಿಸಲಾಯಿತು.**

---

**ವಿಷಯ ಸಂಖ್ಯೆ: 15.03**

**ವಿಷಯ:** **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ/ಸ್ನಾತಕೋತ್ತರ ಮತ್ತು ಡಿಪ್ಲೋಮಾ ಪದವಿ ವಿದ್ಯಾರ್ಥಿಗಳಿಗೆ 2020ರ ಏಪ್ರಿಲ್/ಮೇ ಮಾಹೆಯಲ್ಲಿ ಪರೀಕ್ಷೆಗಳನ್ನು ನಡೆಸಲು ಅನುಮೋದಿಸುವ ಬಗೆಗೆ.**

*****

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2013-14, 2014-15ಮತ್ತು 2018-19ರ ಸ್ನಾತಕ/ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು, ಮತ್ತು 2001-02 ರಿಂದ 2010-11ನೇ ಸಾಲಿನ ಸ್ನಾತಕ, ಹಾಗೂ 2001-02 ರಿಂದ 2012-13ನೇ ಸಾಲಿನ ಸ್ನಾತಕೋತ್ತರ ಮತ್ತು ಡಿಪ್ಲೋಮಾ /ಸರ್ಟಿಫಿಕೇಟ್ ಕೋರ್ಸ್ ಪದವಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ನಡೆಸಲು ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ. (ಅಧಿಸೂಚನೆಯ ಪ್ರತಿ ಲಗತ್ತಿಸಿದೆ).

ಈ ಸಂಬಂಧವಾಗಿ 2013-14, 2014-15ನೇ ಸಾಲಿನ ಸ್ನಾತಕ/ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಮತ್ತು 2011-12, 2012-13 ಹಾಗೂ 2018-19ನೇ ಸಾಲಿನ ಸ್ನಾತಕ ಪದವಿ ವಿದ್ಯಾರ್ಥಿಗಳಿಗೆ 2020ರ ಏಪ್ರಿಲ್/ಮೇ ಮಾಹೆಯಲ್ಲಿ ಪೂರಕ ಪರೀಕ್ಷೆಗಳನ್ನು ನಡೆಸಬೇಕಾಗಿರುತ್ತದೆ ಮತ್ತು 2001-02 ರಿಂದ 2012-13ನೇ ಸಾಲಿನ ಸ್ನಾತಕ/ ಸ್ನಾತಕೋತ್ತರ ಮತ್ತು ಡಿಪ್ಲೋಮಾ/ಸರ್ಟಿಫಿಕೇಟ್ ಕೋರ್ಸ್ ಪದವಿ ವಿದ್ಯಾರ್ಥಿಗಳಿಗೆ ನಂತರದಲ್ಲಿ ಮೈಸೂರು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗಳನ್ನು ನಡೆಸಬೇಕಾಗಿರುತ್ತದೆ.

ಡೀನ್(ಶೈಕ್ಷಣಿಕ) ಕುಲಪತಿಗಳು

ಸದರಿ ವಿಷಯವನ್ನು 15ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಚರ್ಚೆ ಹಾಗೂ ನಿರ್ಣಯಕ್ಕಾಗಿ ಮಂಡಿಸಲಾಗಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಎಲ್ಲಾ ಕೋರ್ಸುಗಳಿಗೆ ಪ್ರವೇಶಾತಿ ಆಗಿರುವ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಗುಣವಾಗಿ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು ಪರಿಶೀಲಿಸಿ, ಆ ವಿದ್ಯಾರ್ಥಿಗಳಿಗೆ ವಾರ್ಷಿಕ ಹಾಗು ಪೂರಕ ಪರೀಕ್ಷೆಗಳನ್ನು ನಡೆಸಬೇಕಾಗಿರುತ್ತದೆಂದು ಸಭೆಯಲ್ಲಿ ಚರ್ಚಿಸಿ ಈ ಕೆಳಕಂಡಂತೆ ತೀರ್ಮಾನಿಸಲಾಯಿತು.

ತೀರ್ಮಾನ : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ/ಸ್ನಾತಕೋತ್ತರ ಮತ್ತು ಡಿಪ್ಲೋಮಾ ಪದವಿ ವಿದ್ಯಾರ್ಥಿಗಳಿಗೆ 2020ರ ಏಪ್ರಿಲ್/ಮೇ ಮಾಹೆಯಲ್ಲಿ ಪರೀಕ್ಷೆಗಳನ್ನು ನಡೆಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

-----

ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು

ವಿಷಯ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಯು.ಜಿ.ಸಿ. ವೇತನ ಪಡೆಯುತ್ತಿರುವ ಬೋಧಕ ವರ್ಗ ಹಾಗು ತತ್ಸಮಾನ ಹುದ್ದೆಯವರಿಗೆ 7ನೇ ವೇತನ ಆಯೋಗದ ಪರಿಷ್ಕೃತ ಆದೇಶವನ್ನು (Revised order) ಅನುಷ್ಠಾನಗೊಳಿಸಲು ರಚಿಸಿರುವ ಪರಿನಿಯಮಕ್ಕೆ ಅನುಮೋದನೆ ಪಡೆಯುವ ಬಗ್ಗೆ.

*****

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಯು.ಜಿ.ಸಿ ವೇತನ ಪಡೆಯುತ್ತಿರುವ ಬೋಧಕ ವರ್ಗ ಹಾಗು ತತ್ಸಮಾನ ಹುದ್ದೆಯವರಿಗೆ ವಿಶ್ವವಿದ್ಯಾನಿಲಯದಲ್ಲಿ ಈಗಾಗಲೇ ಯು.ಜಿ.ಸಿ. 7ನೇ ವೇತನ ಆಯೋಗದ ಶಿಫಾರಸ್ಸಿನ ರೀತ್ಯಾ ಪರಿಷ್ಕೃತ ವೇತನವನ್ನು ನೀಡುತ್ತಿದ್ದು, ಅದರಂತೆ ಯು.ಜಿ.ಸಿ ಯು **STATUTES RELATING TO IMPLEMENTING THE REVISED UGC PAY SCALES TO TEACHERS AND LIBRARIANS OF KARNATAKA STATE OPEN UNIVERSITY (In exercise of powers conferred by sections 22(d) read with section 23 (2) of the Karnataka state open university act, the board of management makes the following statutes)** ಪ್ರಕಾರ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಪರಿಷ್ಕೃತ ಅದೇಶದ ಅನ್ವಯ ವಿಶ್ವವಿದ್ಯಾನಿಲಯದ ಬೋಧಕ ವರ್ಗ ಹಾಗು ತತ್ಸಮಾನ ಹುದ್ದೆಯವರಿಗೆ ಅನುಷ್ಠಾನಗೊಳಿಸುವ ಸಂಬಂಧ ರಚಿಸಲಾಗಿರುವ ಪರಿನಿಯಮವನ್ನು 15ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಚರ್ಚೆ ಮತ್ತು ನಿರ್ಣಯಕ್ಕಾಗಿ ಮಂಡಿಸಲಾಗಿದೆ. (ಪ್ರತಿ ಲಗತ್ತಿಸಿದೆ)

ಡೀನ್(ಶೈಕ್ಷಣಿಕ) ಕುಲಪತಿಗಳು

ಸದರಿ ವಿಷಯದ ಬಗ್ಗೆ ಹಾಜರಿದ್ದ ಸದಸ್ಯರುಗಳು ಈ ವಿಷಯದ ಬಗ್ಗೆ ರಚಿಸಲಾಗಿರುವ ಪರಿನಿಯಮವನ್ನು ಪರಿಶೀಲಿಸಿ, ಈ ಕೆಳಕಂಡಂತೆ ತೀರ್ಮಾನಿಸಲಾಯಿತು.

**ತೀರ್ಮಾನ :** **7ನೇ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಪರಿಷ್ಕೃತ ಆದೇಶದಂತೆ ಚರ್ಚಿಸಿ, ವಿಶ್ವವಿದ್ಯಾನಿಲಯದ ಬೋಧಕ ವರ್ಗ ಹಾಗು ತತ್ಸಮಾನ ಹುದ್ದೆಯವರಿಗೆ ಅನುಷ್ಠಾನಗೊಳಿಸುವ ಸಂಬಂಧ ರಚಿಸಲಾಗಿರುವ ಪರಿನಿಯಮವನ್ನು ಅನುಮೋದಿಸಲಾಯಿತು.**

------

ಅಂತಿಮವಾಗಿ 15ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ ಮಂಡಿತ ವಿಷಯಗಳ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸುಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲಾ ಸದಸ್ಯರುಗಳಿಗೂ ಮಾನ್ಯ ಕುಲಪತಿಗಳು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

**ಡೀನ್(ಶೈಕ್ಷಣಿಕ)** **ಕುಲಪತಿಗಳು ಹಾಗೂ ಅಧ್ಯಕ್ಷರು**